ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 21/02/2020

# ಮೇಲ್ಮನೆಯಲ್ಲಿ ಬೀದರ್‌ನ ಶಾಹೀನ್ ಶಾಲೆ ಜಟಾಪಟಿ

## ದೇಶದ್ರೋಹ ಕೇಸ್ ವಾಪಸ್‌ಗೆ ವಿಪಕ್ಷ ಆಗ್ರಹ

## ಸದನದ ಬಾವಿಗಿಳಿದು ಕೈ ನಾಯಕರ ಧರಣಿ

• **ಕನ್ನಡಪ್ರಭ ವಾರ್ತೆ** ವಿಧಾನ ಪರಿಷತ್

ಬೀದರ್ ಶಾಹೀನ್ ಶಾಲೆಯಲ್ಲಿ ಪ್ರದರ್ಶಿಸಿದ ನಾಟಕ ಸಂಬಂಧ ದೇಶದ್ರೋಹದ ಆರೋಪದ ಮೇಲೆ ಶಿಕ್ಷಕಿ, ಮಗುವಿನ ತಾಯಿ ಹಾಗೂ ಶಾಲೆಯ ಆಡಳಿತ ಮಂಡಳಿ ವಿರುದ್ಧ ಹಾಕಿರುವ ಪ್ರಕರಣವನ್ನು ವಾಪಸ್ ಪಡೆಯುವಂತೆ ಆಗ್ರಹಿಸಿ ಪ್ರತಿಪಕ್ಷದ ಸದಸ್ಯರು ಸದನದ ಬಾವಿಗಿಳಿದು ಧರಣಿ ನಡೆಸಿದ ಘಟನೆ ಗುರುವಾರ ನಡೆಯಿತು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆ ಎಂದು ಪ್ರತಿಪಕ್ಷಗಳು ಪ್ರಸ್ತಾಪಿಸಿದ ವಿವಿಧ ವಿಷಯಗಳಿಗೆ ಗೃಹ ಸಚಿವರು ಉತ್ತರ ನೀಡುತ್ತಾ, ಶಾಹೀನ್ ಶಾಲೆ ಪ್ರಕರಣದ ಬಗ್ಗೆ ವಿವರಿಸುವ ಸಂದರ್ಭದಲ್ಲಿ ಮಧ್ಯ ಪ್ರವೇಶಿಸಿದ ಕೆ.ಟಿ. ಶ್ರೀಕಂಠೇಗೌಡ, ಭೋಜೇಗೌಡ ಸೇರಿದಂತೆ ಜೆಡಿಎಸ್, ಕಾಂಗ್ರೆಸ್ ಸದಸ್ಯರು, ಪ್ರಕರಣವನ್ನು ವಾಪಸ್ ಪಡೆಯಲು ಒತ್ತಾಯಿಸಿದರು. ಮಗುವಿಗೆ ತಾಯಿಯೇ ನಾಟಕ ತಾಲೀಮು ಮಾಡಿಸಿದ್ದಾರೆ ಎಂದು ಎಫ್‌ಐಆರ್‌ನಲ್ಲಿ ಹೇಳಲಾಗಿದೆ. ಆದರೆ ಮಗುವಿನ ತಾಯಿ ಕೂಲಿ ಕೆಲಸ ಮಾಡುವ ಅವಿದ್ಯಾವಂತೆ. ಇಂತಹ ನಾಟಕಗಳನ್ನು ಶಿಕ್ಷಕರು ಮಾತ್ರ ಕಲಿಸಲು ಸಾಧ್ಯ ಎಂದು ಭೋಜೇಗೌಡ ಹೇಳಿದರು. ಈ ಮಾತಿಗೆ ಆಕ್ಷೇಪ ವ್ಯಕ್ತಪಡಿಸಿದ ಸಂಕನೂರು, ಪುಟ್ಟಣ್ಣ, ವೈ.ಎ.ನಾರಾಯಣಸ್ವಾಮಿ ಮುಂತಾದವರು ಶಿಕ್ಷಕರು ಇಂತಹ ನಾಟಕಗಳನ್ನು ಹೇಳಿಕೊಡುವುದಿಲ್ಲ, ಆಡಿರುವ ಮಾತನ್ನು ವಾಪಸ್ ಪಡೆಯುವಂತೆ ಒತ್ತಾಯಿಸಿದರು.

ಈ ಮಾತಿಗೆ ಪ್ರತಿಕ್ರಿಯಿಸಿದ ಗೃಹ ಸಚಿವರು, ದೂರಿನ ಆಧಾರದ ಮೇಲೆ ಪ್ರಕರಣ ದಾಖಲು ಮಾಡಿಕೊಂಡು ಎಫ್‌ಐಆರ್ ಮಾಡಬೇಕು ಎಂದು ಕೋರ್ಟ್ ಹೇಳಿದೆ. ಹೀಗಾಗಿ ಎಫ್‌ಐಆರ್ ದಾಖಲು ಮಾಡಿದ ಮೇಲೆ ಬದಲಿಸಲಾಗದು ಎಂದರು.